ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 98 |
| ಮಾನ್ಯ ಸದಸ್ಯರ ಹೆಸರು | ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ: | 12-09-2022 |
| ಉತ್ತರಿಸುವ ಸಚಿವರು | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಶಿವಮೊಗ್ಗ ಹಾಗೂ ದಾವಣಗೆರೆ ಜಿಲ್ಲೆ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು; | ಶಿವಮೊಗ್ಗ ಜಿಲ್ಲೆ ವ್ಯಾಪ್ತಿಯಲ್ಲಿ 93 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಹಾಗೂ ದಾವಣಗೆರೆ ಜಿಲ್ಲೆ ವ್ಯಾಪ್ತಿಯಲ್ಲಿ 82 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಕಾರ್ಯನಿರ್ವಹಿಸುತ್ತಿವೆ. |
| ಆ | ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆಗಳು ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ಎಷ್ಟು ಮೊತ್ತ ಮೀಸಲಿಟ್ಟಿದೆ ಹಾಗೂ ಯಾವ ಕಾಲಮಿತಿಯಲ್ಲಿ ಈ ಕಾರ್ಯವನ್ನು ಪೂರ್ಣಗೊಳಿಸಲಾಗುವುದು; | ಹೌದು.<br><br>2022-23ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ಹೆಚ್ಚಿನ ಕಾರ್ಯದೊತ್ತಡವಿರುವ 100 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮಾದರಿ ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲು ತೀರ್ಮಾನಿಸಲಾಗಿದೆ. ಸರ್ಕಾರ ಇದಕ್ಕಾಗಿ ರೂ.1000 ಕೋಟಿಗಳ ಅನುದಾನ ಮೀಸಲಿಟ್ಟಿದ್ದು, 03 ವರ್ಷಗಳ ಅವಧಿಯಲ್ಲಿ ಕ್ರಮಕೈಗೊಳ್ಳಲಾಗುವುದು. |
| ಇ | ಶಿವಮೊಗ್ಗದಲ್ಲಿ ಆಯುಷ ವಿಶ್ವವಿದ್ಯಾಲಯ ಯಾವ ಹಂತದಲ್ಲಿದೆ; ಯಾವಾಗ ಪ್ರಾರಂಭವಾಗುವುದು? | ಶಿವಮೊಗ್ಗ ನಗರದಲ್ಲಿ ಆಯುಷ್ ವಿಶ್ವವಿದ್ಯಾಲಯಕ್ಕಾಗಿ ಈ ವರ್ಷ ರೂ.20.00 ಕೋಟಿಗಳ ವೆಚ್ಚದಲ್ಲಿ ಸಿವಿಲ್ ಕಾಮಗಾರಿಗಳನ್ನು ಕೈಗೊಳ್ಳಲು ನೀಲನಕ್ಷೆ ಹಾಗೂ ಅಂದಾಜು ಪಟ್ಟಿಯನ್ನೊಳಗೊಂಡಂತೆ (DPR) ವಿಸ್ತೃತ ಯೋಜನಾ ವರದಿಯನ್ನು ಮುಖ್ಯ ಅಭಿಯಂತರರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು ಇವರು ಸಿದ್ಧಪಡಿಸಿದ್ದು, ಕಾಮಗಾರಿ ಬಗ್ಗೆ ಈಗಾಗಲೇ ಟೆಂಡರ್ ಪ್ರಕ್ರಿಯೆ ಪ್ರಾರಂಭವಾಗಿದೆ. |

ಆಕುಕ 136 ಎಸ್‌ಎಂಎಂ 2022

(ಡಾ|| ಕೆ.ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು